ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	698
ಸದಸ್ಯರ ಹೆಸರು	:	ಶ್ರೀ.ಕೆ.ಟಿ.ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ)
ಉತ್ತರಿಸುವ ದಿನಾಂಕ	:	25.09.2020
ಉತ್ತರಿಸುವ ಸಚಿವರು	:	ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು

ಕ್ರ.ಸಂ	ಪ್ರಶ್ನೆಗಳು	ಉತ್ತರಗಳು
ಅ)	ರಾಜ್ಯದಲ್ಲಿ ಎಷ್ಟು ಪಶು ಆಸ್ಪತ್ರೆಗಳಿವೆ; ಇದರಲ್ಲಿ ಸ್ವಂತ ಕಟ್ಟಡಗಳಿಲ್ಲದ ಆಸ್ಪತ್ರೆಗಳು ಎಷ್ಟು;	ರಾಜ್ಯದಲ್ಲಿ ಜಾನುವಾರುಗಳಿಗೆ ಮತ್ತು ಸಾಕುಪ್ರಾಣಿಗಳಿಗೆ ಉತ್ತಮ ಪಶುವೈದ್ಯಕೀಯ ಸೇವೆ ಒದಗಿಸಲು 30 ಪಾಲಿಕ್ಲಿನಿಕ್, 665 ಪಶು ಆಸ್ಪತ್ರೆ, 2135 ಪಶುಚಿಕಿತ್ಸಾಲಯ, 1206 ಪ್ರಾಥಮಿಕ ಪಶುಚಿಕಿತ್ಸಾ ಕೇಂದ್ರ, 176 ಸಂಚಾರಿ ಪಶುಚಿಕಿತ್ಸಾಲಯ ಸೇರಿದಂತೆ ಒಟ್ಟು 4212 ವಿವಿಧ ಹಂತದ ಪಶುವೈದ್ಯಕೀಯ ಸಂಸ್ಥೆಗಳು ಕಾರ್ಯನಿರ್ವಹಿಸಿರುತ್ತಿರುತ್ತವೆ. ಸದರಿ 4212 ಸಂಸ್ಥೆಗಳಲ್ಲಿ 176 ಸಂಚಾರಿ ಪಶುಚಿಕಿತ್ಸಾಲಯಗಳಿದ್ದು, ಉಳಿದಂತೆ ಇರುವ 4036 ಸಂಸ್ಥೆಗಳಲ್ಲಿ 3836 ಸಂಸ್ಥೆಗಳಿಗೆ ಸ್ವಂತ ಕಟ್ಟಡಗಳಿರುತ್ತವೆ ಹಾಗೂ 200 ಪಶುವೈದ್ಯ ಸಂಸ್ಥೆಗಳಿಗೆ ಸ್ವಂತ ಕಟ್ಟಡವಿರುವುದಿಲ್ಲ ಇವುಗಳು ಮಹಾನಗರ ಪಾಲಿಕೆ ಕಟ್ಟಡ, ಗ್ರಾಮ ಪಂಚಾಯಿತಿ ಕಟ್ಟಡ, ಎಂ.ಪಿ.ಸಿ.ಎಸ್. ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುತ್ತವೆ.
ಆ)	ಯಾವ ಕಾಲಮಿತಿಯಲ್ಲಿ ಈ ಆಸ್ಪತ್ರೆಗಳಿಗೆ ಸ್ವಂತ ಕಟ್ಟಡಗಳನ್ನು ಒದಗಿಸಲಾಗುವುದು;	ಸ್ವಂತ ಕಟ್ಟಡ ಇಲ್ಲದೇ ಇರುವ 200 ಪಶುವೈದ್ಯ ಸಂಸ್ಥೆಗಳಿಗೆ ನಿವೇಶನದ ಲಭ್ಯತೆ ಆಧರಿಸಿ ಆರ್.ಐ.ಡಿ.ಎಫ್ ಮತ್ತು ಇಲಾಖೆಯ ಇತರೆ ಅನುದಾನದಡಿಯಲ್ಲಿ ಕಟ್ಟಡಗಳನ್ನು ನಿರ್ಮಿಸಲು ಕ್ರಮ ವಹಿಸಲಾಗುವುದು.
ಇ)	ಒಟ್ಟು ಮಂಜೂರಾದ ಪಶುವೈದ್ಯರ ಹುದ್ದೆಗಳೆಷ್ಟು;	ರಾಜ್ಯದಲ್ಲಿ ಒಟ್ಟು 3317 ಪಶುವೈದ್ಯರ ಹುದ್ದೆಗಳು ಮಂಜೂರಾಗಿರುತ್ತವೆ.

ಈ)	ಖಾಲಿ ಹುದ್ದೆಗಳೆಷ್ಟು; ಯಾವಾಗ ಭರ್ತಿ ಮಾಡಲಾಗುವುದು? (ವಿವರ ನೀಡುವುದು)	ಹಾಲಿ 1064 ಪಶುವೈದ್ಯರ ಹುದ್ದೆಗಳು ಖಾಲಿ ಇರುತ್ತದೆ. ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯಲ್ಲಿ ಖಾಲಿ ಇರುವ ಮುಖ್ಯ ಪಶುವೈದ್ಯಾಧಿಕಾರಿ (ಆಡಳಿತ) ಹಾಗೂ ಮುಖ್ಯ ಪಶುವೈದ್ಯಾಧಿಕಾರಿ ಮತ್ತು ಹಿರಿಯ ಪಶುವೈದ್ಯಾಧಿಕಾರಿಗಳ ಖಾಲಿ ಹುದ್ದೆಗಳನ್ನು ಹಂತ ಹಂತವಾಗಿ ಪಶುವೈದ್ಯಾಧಿಕಾರಿ ಹುದ್ದೆಯಿಂದ ಕಾಲಮಿತಿ ಪದೋನ್ನತಿ/ ಮುಂಬಡ್ತಿ ಮುಖಾಂತರ ತುಂಬಲು ಕ್ರಮವಹಿಸಲಾಗಿದೆ ಹಾಗೂ ಇಲಾಖೆಯಲ್ಲಿ ಖಾಲಿ ಇರುವ 639 ಪಶುವೈದ್ಯಾಧಿಕಾರಿ ಹುದ್ದೆಗಳನ್ನು ವಿಶೇಷ ನೇಮಕಾತಿ ನಿಯಮಗಳ ಮುಖಾಂತರ ಭರ್ತಿ ಮಾಡುವ ಪ್ರಸ್ತಾವನೆಗೆ ಪ್ರಸುತ್ತ ಆರ್ಥಿಕ ನಿರ್ಬಂಧಗಳ ಹಿನ್ನಲೆಯಲ್ಲಿ ಆರ್ಥಿಕ ಇಲಾಖೆಯು ಸಹಮತಿ ನೀಡಿರುವುದಿಲ್ಲ, ಆದರೆ. ಹೊರಗುತ್ತಿಗೆ ಆಧಾರದ ಮೇಲೆ ಪಶುವೈದ್ಯರ ನೇಮಕ ಮಾಡುವ ಪ್ರಸ್ತಾವನೆಯು ಪರಿಶೀಲನೆಯಲ್ಲಿರುತ್ತದೆ. ಮುಂದುವರೆದು. 371 (ಜೆ) ರಡಿ ಕಲ್ಯಾಣ ಕರ್ನಾಟಕ ಭಾಗದಲ್ಲಿ ಖಾಲಿ ಇರುವ 61 ಪಶುವೈದ್ಯಾಧಿಕಾರಿ ಹುದ್ದೆಗಳನ್ನು ಭರ್ತಿ ಮಾಡಲು ವಿಶೇಷ ನೇಮಕಾತಿ ನಿಯಮಗಳನ್ನು ರಚಿಸಿ ಅಧಿಸೂಚನೆ ಹೊರಡಿಸಲಾಗಿರುತ್ತದೆ. ಆದರೆ ಆರ್ಥಿಕ ಇಲಾಖೆಯು ದಿನಾಂಕ: 06.07.2020 ರ ಸುತ್ತೋಲೆಯಲ್ಲಿ ಆರ್ಥಿಕ ನಿರ್ಬಂಧಗಳ ಹಿನ್ನಲೆಯಲ್ಲಿ 2020-21 ನೇ ಸಾಲಿನ ಆರ್ಥಿಕ ವರ್ಷದಲ್ಲಿ ಕಲ್ಯಾಣ-ಕರ್ನಾಟಕ ಭಾಗದ ಹುದ್ದೆಗಳು ಹಾಗೂ ಬ್ಯಾಕ್ ಲಾಗ್ ಹುದ್ದೆಗಳು ಸೇರಿದಂತೆ ಎಲ್ಲಾ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡುವುದನ್ನು ಮುಂದಿನ ಆದೇಶದವರೆಗೆ ತಡೆಹಿಡಿಯುವಂತೆ ತಿಳಿಸಿರುತ್ತದೆ. ಆದುದರಿಂದ ಸದರಿ ನೇಮಕಾತಿ ಪ್ರಕ್ರಿಯೆಯನ್ನು ತಾತ್ಕಾಲಿಕವಾಗಿ ಮುಂದಿನ ಆದೇಶದವರೆಗೂ ತಡೆ ಹಿಡಿಯಲಾಗಿರುತ್ತದೆ.

ಸಂ: ಪಸಂಮೀ ಇ-154 ಪಸಸೇ 2020

(ಪ್ರಭು. ಬಿ.ಚವ್ಹಾಣ್)
ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು